# ಚುನಾವಣಾ ರಾಯಭಾರಿ ಮಹೆಬೂಬ್ ಕಿಲ್ಲೇದಾರ ಅವರಿಂದ ಮತದಾನ ಜಾಗೃತಿ



ಕೊಪ್ಪಳ, ಮೇ 02 : ಕೊಪ್ಪಳ ತಾಲೂಕಿನ ಹನಕುಂಟಿ ಗ್ರಾಮದಲ್ಲಿ ಮೇ 01 ರಂದು ನಡೆದ ಕೊಪ್ಪಳ ಕುಟುಂಬದ ಇವರಾಂಬಿ ಹಾಗೂ ಮಹಮ್ಮದ್ ರಫೀ ಇವರ ವಿವಾಹ ಸಮಾರಂಭದಲ್ಲಿ ಕೊಪ್ಪಳ ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಮತ ದಾನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.ವಿವಾಹ ಸಮಾಂಭದಲ್ಲಿ ಹಾಜರಿದ್ದ ನವ ವಧು-ವರರು ವೇದಿಕೆಯಲ್ಲಿ ಮೇ-7ರಂದು ಲೋಕಸಭಾ ಚುನಾವಣೆ ಜರುಗಲಿರುವ ಪ್ರಯುಕ್ತ ನಮ್ಮ ಮತ, ನಮ್ಮ ಹಕ್ಕು ಪೋಸ್ಟರ್ ಗಳ ಮೂಲಕ ಮತದಾನ ಜಾಗೃತಿ ಮೂಡಿಸಿದ್ದು ಕಾರ್ಯಕ್ರಮದಲ್ಲಿ ಹಾಜರಿದ್ದವರಿಗೆ ಖುಷಿ ನೀಡಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಚುನಾವಣಾ ರಾಯಭಾರಿ ಮಹೆಬೂಬ್ ಕಿಲ್ಲೇದಾರ ಕಡ್ಡಾಯವಾಗಿ ಮೇ-7ರಂದು ತಪ್ಪದೇ ಮತ ಚಲಾಯಿಸಿರೆಂದು ಹಾಜರಿದ್ದವರಿಗೆ ಕರೆ ನೀಡಿದರು.

ಈ ಸಂಧರ್ಭದಲ್ಲಿ ಜಿಲ್ಲಾ ಚುನಾವಣಾ ರಾಯಭಾರಿ ಪೂರ್ಣಿಮಾ ಯೋಳುಬಾವಿ ಮಾತನಾಡಿ, ಮತದಾನ ನಮ್ಮೆಲ್ಲರ ಹಕ್ಕು. ಅದನ್ನು ಯಾರಿಗೂ ಮಾರಿಕೊಳ್ಳಬೇಡಿ ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಇನ್ನೋರ್ವ ಜಿಲ್ಲಾ ಚುನಾವಣಾ ರಾಯಭಾರಿ ರಮ್ಯಾ ಹಾಗೂ ಅಂಗನವಾಡಿ ಕಾರ್ಯಕರ್ತೆ ಶ್ರೀಮತಿ, ಶಿಕ್ಷಕಿ ತಾರಾಬಾನು ಕಿಲ್ಲೇದಾರ, ಸಲ್ಮಾ, ಆಸ್ಮಾ, ರಫಿ, ಶಬಾನಾ ಬಳಿಗಾರ, ಖಾಜಹುಸೇನ, ಮಹೆಬೂಬ್ ಚಿಕ್ಕಬಗನಾಳ ಭಾಗವಹಿಸಿದ್ದರು ಹಾಗೂ ಅಂಗನವಾಡಿ ಕಾರ್ಯಕರ್ತರು, ಆಶಾ ಕಾರ್ಯಕರ್ತರು ಭಾಗವಹಿಸಿದ್ದರು.

# ಮತಗಟ್ಟೆ ಅಧಿಕಾರಿಗಳಿಗೆ ತರಬೇತಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರಿಂದ ಪರಿಶೀಲನೆ ಗೊಂದಲಕ್ಕೀಡಾಗದೆ ವ್ಯವಸ್ಥಿತವಾಗಿ ಮತದಾನ ಪ್ರಕ್ರಿಯೆ ನಡೆಸಲು ಸೂಚನೆ



ಬಳ್ಳಾರಿ ಮೇ. : ಮತದಾನ ಸೇರಿದಂತೆ ಚುನಾವಣೆ ಕಾರ್ಯಕ್ಕೆ ನೇಮಕಗೊಂಡ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ಸೂಕ್ತ ತರಬೇತಿ ಪಡೆದು, ಯಾವುದೇ ಗೊಂದಲಕ್ಕೀಡಾಗದೆ ವ್ಯವಸ್ಥಿತವಾಗಿ ಮತದಾನ ಪ್ರಕ್ರಿಯೆ ನಡೆಸುವಂತೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಸೂಚನೆ ನೀಡಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮೇ. 07 ರಂದು ಮತದಾನ ನಡೆಯಲಿದ್ದು, ಇದಕ್ಕಾಗಿ ಮತಗಟ್ಟೆ ಅಧಿಕಾರಿ, ಸಿಬ್ಬಂದಿಗಳಿಗೆ ವಿಧಾನಸಭಾ ಕ್ಷೇತ್ರವಾರು ನಗರದ ವಿವಿಧೆಡೆ ಎರಡನೆ ಹಂತದ ತರಬೇತಿಯನ್ನು ಬುಧವಾರ ಏರ್ಪಡಿಸಲಾಗಿದ್ದು, ತರಬೇತಿ ಸ್ಥಳಕ್ಕೆ ಖುದ್ದು ಭೇಟಿ ನೀಡಿ ಪರಿಶೀಲನೆ ನಡೆಸಿ, ಬಳಿಕ ಮಾತನಾಡಿದರು.

ಮೇ. 07 ರಂದು ಮತದಾನ ನಡೆಯಲಿದ್ದು, ಮತದಾನ ಪ್ರಕ್ರಿಯೆಯನ್ನು ಸುಗಮವಾಗಿ ಹಾಗೂ ಅಚ್ಚುಕಟ್ಟಾಗಿ ನಡೆಸುವಲ್ಲಿ ಮತಗಟ್ಟೆ ಕರ್ತವ್ಯಕ್ಕೆ ನಿಯೋಜಿತರಾದ ಅಧಿಕಾರಿ, ಸಿಬ್ಬಂದಿಗಳ ಪಾತ್ರ ಮಹತ್ವದ್ದಾಗಿದೆ. ಹೀಗಾಗಿ ಯಾವುದೇ ಗೊಂದಲಗಳಿಗೆ ಅವಕಾಶ ಮಾಡಿಕೊಡದೆ, ವ್ಯವಸ್ಥಿತವಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಉಪವಿಭಾಗಾಧಿಕಾರಿ ಹೇಮಂತ್ ಕುಮಾರ್ ಅವರು ತರಬೇತಿಗಾಗಿ ಆಗಮಿಸಿದ್ದ ಅಧಿಕಾರಿ, ಸಿಬ್ಬಂದಿಗಳಿಗೆ ಪ್ರೋತ್ಸಾಹ ಮಾತುಗಳ ಮೂಲಕ ಹುರಿದುಂಬಿಸುವ ಕಾರ್ಯ ಮಾಡಿದರು. ಮುಕ್ತ ಹಾಗೂ ನ್ಯಾಯ ಸಮ್ಮತವಾಗಿ ಚುನಾವಣೆ ನಡೆಸಲು ಎಲ್ಲ ಅಧಿಕಾರಿ, ಸಿಬ್ಬಂದಿಗಳು ಬದ್ಧರಾಗಿರಬೇಕು. ಮೇ. 06 ರಂದೇ ಮಸ್ಟರಿಂಗ್ ಕಾರ್ಯ ನಡೆಯಲಿದ್ದು, ಇದಕ್ಕೆ ಆಗಮಿಸುವ ಅಧಿಕಾರಿ, ಸಿಬ್ಬಂದಿಗಳಿಗೆ ಸಾರಿಗೆ, ಊಟೋಪಹಾರ ಸೇರಿದಂತೆ ಸಕಲ ವ್ಯವಸ್ಥೆ ಮಾಡಿಕೊಡಲಾಗುವುದು. ಮತದಾನ ಪ್ರಕ್ರಿಯೆ ಪ್ರಾರಂಭಕ್ಕೂ ಮುನ್ನ ನಿರ್ವಹಿಸಬೇಕಾದ ಕಾರ್ಯಗಳು, ಮತದಾನದ ದಿನ ಅಣಕು ಮತದಾನ, ನಂತರ ಮತದಾನ ಪ್ರಕ್ರಿಯೆ ನಡೆಸುವ ರೀತಿ ಹಾಗೂ ಮತದಾನವನ್ನು ಪೂರ್ಣಗೊಳಿಸಿ, ಡಿಮಸ್ಟರಿಂಗ್ ನಲ್ಲಿ ಇವಿಎಂ ಸಹಿತ ಇತರೆ ದಾಖಲೆಗಳನ್ನು ಹಸ್ತಾಂತರಿಸುವ ಬಗ್ಗೆ ಕೂಲಂಕುಳವಾಗಿ ತರಬೇತಿ ಹಾಗೂ ಮಾಹಿತಿ ನೀಡಲಾಗುವುದು. ಚುನಾವಣಾ ಕರ್ತವ್ಯಕ್ಕೆ ನಿಯೋಜನೆಗೊಂಡ ಸಿಬ್ಬಂದಿಗಳು, ಎಲ್ಲಾ ಹಂತದ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದರು.

ಈ ಸಂದರ್ಭದಲ್ಲಿ ತಹಸಿಲ್ದಾರ್ ಗುರುರಾಜ್, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಬಸಪ್ಪ ಸೇರಿದಂತೆ ಮತ್ತಿತರು ಇದ್ದರು.

ಕಂಪ್ಲಿ ವಿಧಾನಸಭಾ ಕ್ಷೇತ್ರದ ಮತಗಟ್ಟೆ ಅಧಿಕಾರಿ, ಸಿಬ್ಬಂದಿಗಳಿಗೆ ಬಳ್ಳಾರಿ ನಗರದ ಸೇಂಟ್ ಫಿಲೋಮಿನಾ ಸಂಯುಕ್ತ ಜೂನಿಯರ್ ಕಾಲೇಜಿನಲ್ಲಿ ತರಬೇತಿ ಏರ್ಪಡಿಸಲಾಯಿತು. ಅದೇ ರೀತಿ ಬಳ್ಳಾರಿ ಗ್ರಾಮೀಣ ಕ್ಷೇತ್ರದ ಅಧಿಕಾರಿ, ಸಿಬ್ಬಂದಿಗೆ ಎಸ್.ಕೆ. ಮೋದಿ ಸ್ಕೂಲ್‌ನಲ್ಲಿ. ಬಳ್ಳಾರಿ ನಗರ ಕ್ಷೇತ್ರದ ಅಧಿಕಾರಿ, ಸಿಬ್ಬಂದಿಗೆ ಸೇಂಟ್ ಜಾನ್ಸ್ ಪಿ.ಯು. ಕಾಲೇಜಿನಲ್ಲಿ ತರಬೇತಿ ಕಾರ್ಯಕ್ರಮ ಏರ್ಪಡಿಸಲಾಯಿತು.

# ಮೇ 07 ಮಹತ್ವದ ದಿನ, ಯಾರೂ ಮತದಾನದಿಂದ ವಂಚಿತರಾಗದಿರಿ:ತಾಪಂ ಇಓ ಎಸ್.ಕೆ.ಇನಾಮದಾರ



ರೋಣ : ಲೋಕಸಭಾ ಚುನಾವಣೆ 2024 ರ ಅಂಗವಾಗಿ ಗುರುವಾರ ರೋಣ ಪಟ್ಟಣದ ತಾಲೂಕ ಪಂಚಾಯತಿಯಿಂದ ಸಿದ್ದಾರೂಡ ಮಠದವರೆಗೂ ಹಾಗೂ ತಾಲೂಕ ಬಸ್ ನಿಲ್ದಾಣದಲ್ಲಿ ಮತದಾನ ಜಾಗೃತಿಗಾಗಿ ಬೈಕ್ ರ್ಯಾಲಿ ನಡೆಯಿತು. ತಾಲೂಕ ಪಂಚಾಯತಿ ಮುಂಭಾಗದಲ್ಲಿ ಕಾರ್ಯನಿರ್ವಾ ಹಕ ಅಧಿಕಾರಿ ಎಸ್.ಕೆ ಇನಾಮದಾರ ಅವರು ಸೆಲ್ಫಿ ಸ್ಟಾಂಡ್‌ಗೆ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು ಮೇ 7 ರಂದು ನಡೆಯುವ ಲೋಕಸಭಾ ಚುನಾವಣೆಗೆ ಎಲ್ಲರೂ ಮತದಾನದ ದಿನ ತಪ್ಪದೆ ನಮ್ಮ ಹಕ್ಕು ಚಲಾಯಿಸಿ ಎಂದು ಹೇಳಿದರು ಚುನಾವಣಾ ಆಯೋಗ ನೀಡಿರುವ ಓಟರ್ ಹೆಲ್ಪ್ ಲೈನ್, ಸಕ್ಷಾಮ್ ಆ?ಯಪ್,ಸಿವಿಜಿಲ್ ಆ?ಯಪ್‌ಗಳನ್ನು ಬಳಸಿ ನೈತಿಕ ಮತದಾನಕ್ಕೆ ಸಹಕರಿಸಿ ಹಾಗೂ ಚುನಾವಣಾ ಅಕ್ರಮಗಳಿಗೆ ಸಂಬಂಧಿಸಿದ ದೂರುಗಳನ್ನು ನೀಡಬಹುದಾಗಿದೆ ಎಂದರು.

ಮೇ 7 ರಂದು ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಯಾವುದೇ ಆಮಿಷಕ್ಕೆ ಒಳಗಾಗದೇ ವಿವೇಚನೆಯಿಂದ ಅರ್ಹರೆಲ್ಲರೂ ಮತ ಚಲಾಯಿಸಬೇಕು. ಪ್ರಜಾಪ್ರಭುತ್ವ ಗಟ್ಟಿಗೊಳಿಸಲು ಕಡ್ಡಾಯವಾಗಿ ಮತದಾನ ಮಾಡಿ ಎಂದರು. ಈ ಸಂದರ್ಭದಲ್ಲಿ ತಾಲೂಕು ಪಂಚಾಯತ ಸಿಬ್ಬಂದಿಗಳು, ನರೇಗಾ ಸಿಬ್ಬಂದಿಗಳು ಹಾಗೂ ಹೆಸ್ಕಾಂ ಸಿಬ್ಬಂದಿಗಳು ಭಾಗವಹಿಸಿದ್ದರು. ಬೈಕ್ ರ್ಯಾಲಿ ರೋಣ ತಾಲೂಕಿನ ಹಸ್ಕಾಂ ಸಿಬ್ಬಂದಿಗಳು ಸೇರಿದಂತೆ ತಾಲೂಕಿನ ವಿವಿಧ ಮಟ್ಟದ ಅಧಿಕಾರಿಗಳು ಬೈಕ್ ರ್ಯಾಲಿ ಮುಖಾಂತರ ಮತದಾನ ಜಾಗೃತಿ ಕುರಿತು ಹಾಗೂ ಕಡ್ಡಾಯವಾಗಿ ಮತದಾನ ಮಾಡಿ, ನಾಮಫಲಕಗಳನ್ನು ಹಿಡಿದು ಮತದಾನ ಜಾಗೃತಿ ಹಾಗೂ ಮತದಾನದ ಬಗ್ಗೆ ಅರಿವು ಮೂಡಿಸಿ, ಕಾರ್ಯಕ್ರಮವನ್ನು ಯಶಸ್ವಿಗೊಳಿಸಲಾಯಿತು.

ಸೆಲ್ಫಿ ಪಾಯಿಂಟ್: ರೋಣ ಪಟ್ಟಣದ ಬಸ್‌ನಿಲ್ದಾಣದಲ್ಲಿ ಹಾಗೂ ತಾಲೂಕ ಪಂಚಾಯತಿ ಕಚೇರಿಯಲ್ಲಿ ಅಳವಡಿಸಿದ ಸೆಲ್ಫಿ ಪಾಯಿಂಟ್ ಗೆ ಯುವ ಮತದಾರರು, ಮೊದಲ ಬಾರಿ ಮತದಾನ ಮಾಡುವ ವಿದ್ಯಾರ್ಥಿಗಳ ಹಾಗೂ ಮಹಿಳೆಯರ ಗಮನ ಸೆಳೆದು ಸೆಲ್ಫಿ ತೆಗೆದುಕೊಂಡಿದ್ದು ವಿಶೇಷವಾಗಿತ್ತು.ಸೆಲ್ಫಿ ಪಾಯಿಂಟ್: ರೋಣ ಪಟ್ಟಣದ ಬಸ್‌ನಿಲ್ದಾಣದಲ್ಲಿ ಹಾಗೂ ತಾಲೂಕ ಪಂಚಾಯತಿ ಕಚೇರಿಯಲ್ಲಿ ಅಳವಡಿಸಿದ ಸೆಲ್ಫಿ ಪಾಯಿಂಟ್ ಗೆ ಯುವ ಮತದಾರರು, ಮೊದಲ ಬಾರಿ ಮತದಾನ ಮಾಡುವ ವಿದ್ಯಾರ್ಥಿಗಳ ಹಾಗೂ ಮಹಿಳೆಯರ ಗಮನ ಸೆಳೆದು ಸೆಲ್ಫಿ ತೆಗೆದುಕೊಂಡಿದ್ದು ವಿಶೇಷವಾಗಿತ್ತು.

# ಇಂದು ಹುಕ್ಕೇರಿಯಲ್ಲಿ ಸಚಿವ ಅಮಿತ್ ಶಾ ಪ್ರಚಾರ ಸಭೆ: ಶಾಸಕ ನಿಖಿಲ್ ಕತ್ತಿ

(1 ನೇ ಪುಟದಿಂದ)

ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿ ನಿಖಿಲ್ ಕತ್ತಿ, ಅಸಮಾಧಾನ ಇರುವುದು ಸಹಜ. ಆದರೆ, ದೇಶದ ಮತ್ತು ಅಭಿವೃದ್ಧಿ ಹಿತದೃಷ್ಟಿಯಿಂದ ಹೈಕಮಾಂಡ್ ತೀರ್ಮಾನವನ್ನು ಒಪ್ಪಿಕೊಳ್ಳಬೇಕಾಗುತ್ತದೆ. ಅಮಿತ್ ಶಹಾ ಸಭೆಯಲ್ಲಿ ಚಿಕ್ಕಪ್ಪ ರಮೇಶ ಕತ್ತಿ ಭಾಗಿಯಾಗಲಿದ್ದು ಅಭ್ಯರ್ಥಿ, ಹಾಲಿ ಸಂಸದ ಅಣ್ಣಾಸಾಹೇಬ ಜೊಲ್ಲೆ ಪುನರಾಯ್ಕೆಯಾಗುವುದು ನಿಶ್ಚಿತ ಎಂದು ಅವರು ಹೇಳಿದರು.

ಕ್ಷೇತ್ರದ ಉಸ್ತುವಾರಿ ಅಪ್ಪಾಸಾಹೇಬ ಚೌಗಲಾ, ಸಂಗಮ ಸಕ್ಕರೆ ಕಾರ್ಖಾನೆ ಅಧ್ಯಕ್ಷ ರಾಜೇಂದ್ರ ಪಾಟೀಲ, ಮಹಾವೀರ ಉದ್ಯೋಗ ಸಮೂಹ ಸಂಸ್ಥೆ ಚೇರಮನ್ ಮಹಾವೀರ ನಿಲಜಗಿ, ಹಿರಣ್ಯಕೇಶಿ ಸಕ್ಕರೆ ಕಾರ್ಖಾನೆ ನಿರ್ದೇಶಕರಾದ ಅಶೋಕ ಪಟ್ಟಣಶೆಟ್ಟಿ, ಬಸವರಾಜ ಮರಡಿ, ಸುರೇಶ ದೊಡ್ಡಲಿಂಗನವರ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಸತ್ಯೆಪ್ಪಾ ನಾಯಿಕ, ಬ್ಲಾಕ್ ಅಧ್ಯಕ್ಷ ರಾಚಯ್ಯಾ ಹಿರೇಮಠ, ಮುಖಂಡರಾದ ಪರಗೌಡ ಪಾಟೀಲ, ಗುರುರಾಜ ಕುಲಕರ್ಣಿ, ಶೀತಲ ಬ್ಯಾಳಿ, ಪಿಂಟು ಶೆಟ್ಟಿ, ರಾಜು ಮುನ್ನೋಳಿ, ಚನ್ನಪ್ಪಾ ಗಜಬರ, ಸುಹಾಸ ನೂಲಿ, ಮಹಾವೀರ ಬಾಗಿ, ಸಂಜು ಬಸ್ತವಾಡ, ಚಿದಾನಂದ ಕಿಲ್ಲೇದಾರ, ಗಿರೀಶ ಕುಲಕರ್ಣಿ, ಸವಿತಾ ಏಣಗಿಮಠ, ಶರ್ಮಿಳಾ ಬಡಮಲ್ಲನವರ ಮತ್ತಿತರರು ಉಪಸ್ಥಿತರಿದ್ದ?

# ಗಾಂಧಿ ಭವನದಲ್ಲಿ ಮತದಾನ ಪ್ರಾರಂಭ
# ಅಗತ್ಯ ಸೇವೆಗಳು ಹಾಗೂ ಕರ್ತವ್ಯ ನಿರತ ಮತದಾರರಿಂದ ಮತದಾನ



ಬಳ್ಳಾರಿ ಟ.: ಬಳ್ಳಾರಿ ಲೋಕಸಭಾ ಸಾರ್ವತ್ರಿಕ ಚುನಾವಣೆ ಕರ್ತವ್ಯ ನಿಮಿತ್ಯ ಮೇ. 07 ರ ಮತದಾನ ದಿನದಂದು ಚುನಾವಣೆ ಸಂಬಂಧಿತ ಅಥವಾ ಇಲಾಖೆಯ ಅನ್ಯ ಕರ್ತವ್ಯದಲ್ಲಿ ನಿರತರಾಗುವ ಅಧಿಕಾರಿ, ಸಿಬ್ಬಂದಿಗಳು ಅಲ್ಲದೆ ಅಗತ್ಯ ಸೇವೆಗಳಡಿ ಕಾರ್ಯ ನಿರ್ವಹಿಸುತ್ತಿರುವ ನೌಕರರಿಗೆ ಮೇ. 01 ರಿಂದ ಮತ ಚಲಾವಣೆಗೆ ಅವಕಾಶ ಕಲ್ಪಿಸಿದ್ದು, ನಗರದ ರೈಲ್ವೆ ನಿಲ್ದಾಣ ಎದುರಿನ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿನ ಗಾಂಧಿ ಭವನದಲ್ಲಿ ವಿವಿಧ ಅಧಿಕಾರಿ, ಸಿಬ್ಬಂದಿಗಳಿಂದ ಮತದಾನ ನಡೆಯಿತು.ಚುನಾವಣೆ ಕರ್ತವ್ಯ ನಿಮಿತ್ಯ ಮೇ. 07 ರ ಮತದಾನ ದಿನದಂದು ಅಗತ್ಯ ಸೇವೆಗಳಡಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಕ್ಷೇತ್ರಗಳ ನೌಕರರು ಮೇ. 07 ರಂದು ಮತದಾನ ಮಾಡಲು ಸಾಧ್ಯವಾಗದ ಕಾರಣ ಅಂತಹವರಿಗೆ ಮೇ. 01ರಿಂದ 03ರವರೆಗೆ ಮತ ಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ. ಅದೇ ರೀತಿ ಮತದಾನ ದಿನದಂದು ಚುನಾವಣೆ ಸಂಬಂಧಿತ ಅಥವಾ ಇಲಾಖೆಯ ಅನ್ಯ ಕರ್ತವ್ಯದಲ್ಲಿ ನಿರತರಾಗುವ ಅಧಿಕಾರಿ, ಸಿಬ್ಬಂದಿಗಳಿಗೆ ಮೇ. 01ರಿಂದ 06 ರವರೆಗೆ ಮತ ಚಲಾಯಿಸಲು ಅನುಕೂಲವಾಗುವಂತೆ ನಗರದ ರೈಲ್ವೆ ನಿಲ್ದಾಣ ಎದುರಿನ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿರುವ ಗಾಂಧಿ ಭವನದಲ್ಲಿ ಪೋಸ್ಟಲ್ ವೋಟಿಂಗ್ ಸೆಂಟರ್ ಸ್ಥಾಪಿಸಲಾಗಿದೆ.ಚುನಾವಣೆ ನಿಮಿತ್ಯ ಮೇ. 07 ರಂದು ಮತದಾನ ನಡೆಯಲಿದ್ದುಅಂದು ಅಗತ್ಯ ಸೇವೆಯಲ್ಲಿ ಕರ್ತವ್ಯ ನಿರತರಾಗುವ ವಿವಿಧ ಕ್ಷೇತ್ರಗಳ ಸಿಬ್ಬಂದಿಗಳು ಮತದಾನದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಚುನಾವಣಾ ಆಯೋಗವು ಮತದಾನ ಮಾಡಲು ವಿಶೇಷ ಕಲ್ಪಿಸಿದೆ.ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಬುಧವಾರ ದಂದು ಗಾಂಧಿ ಭವನದಲ್ಲಿ ಸ್ಥಾಪಿಸಲಾಗಿರುವ ಫೆಸಿಲಿಟೇಶನ್ ಸೆಂಟರ್‌ಗೆ ಆಗಮಿಸಿ, ತಮ್ಮ ಮತದಾನದ ಹಕ್ಕು ಚಲಾಯಿಸಿದರು. ಅದೇ ರೀತಿ ಪೊಲೀಸ್, ಆರೋಗ್ಯ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ಸರದಿ ಸಾಲಿನಲ್ಲಿ ನಿಂತು ಮತದಾನ ಮಾಡಿದರು. ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಗಾಂಧಿ ಭವನದಲ್ಲಿನ ಪೋಸ್ಟಲ್ ವೋಟಿಂಗ್ ಸೆಂಟರ್ ಹಾಗೂ ಫೆಸಿಲಿಟೇಶನ್ ಸೆಂಟರ್‌ಗೆ ಆಗಮಿಸಿ ಪರಿಶೀಲಿಸಿದರು.

# ಚುನಾವಣೆಯ ಪ್ರಜಾಪ್ರಭುತ್ವದ ಹಬ್ಬದಲ್ಲಿ ಎಲ್ಲರೂ ಭಾಗವಹಿಸಿ: ಜಿಲ್ಲಾಧಿಕಾರಿ

(1 ನೇ ಪುಟದಿಂದ)

ಯಶೋಧ ವಂಟಗೋಡಿ ಅವರು ಮಾತನಾಡಿ, ಬಿಸಿಲು ಬಹಳಷ್ಟು ಇರುವುದರಿಂದ ಚುನಾವಣೆ ದಿನದಂದು ಮುಂಜಾನೆಯ ಅವಧಿಯಲ್ಲಿ ಎಲ್ಲರೂ ಕಡ್ಡಾಯವಾಗಿ ಮತ ಚಲಾಯಿಸಿ ಚುನಾವಣಾ ಆಯೋಗದ ನೀರಿಕ್ಷೆಯನ್ನು ಸಫಲಗೊಳಿಸೋಣ ಎಂದರು.ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ ರವರು ಮಾತನಾಡಿ, ಮತದಾನದಿಂದ ಯಾರೂ ಕೂಡಾ ದೂರ ಉಳಿಯದೇ ಕಡ್ಡಾಯವಾಗಿ ಮತದಾನ ಮಾಡಬೇಕೆಂದರು. ದೇಶದಲ್ಲಿ ಸುಭದ್ರ ಸರ್ಕಾರ ರಚಿಸುವಲ್ಲಿ ಮತದಾರರ ಪ್ರಮುಖ ಪಾತ್ರ ಇದೆ ಎಂದರು.ಪ್ರತಿಜ್ಞಾ ವಿಧಿ ಸ್ವೀಕಾರ: ಕಾರ್ಯಕ್ರಮದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ರಾಹುಲ್ ರತ್ನಂ ಪಾಂಡೆಯ ರವರು ಮತದಾರರ ಪ್ರತಿಜ್ಞಾ ವಿಧಿ ಬೋಧಿಸಿದರು. ಇದೇ ವೇಳೆ ನೆರೆದಿದ್ದ ಎಲ್ಲರೂ ಪ್ರತಿಜ್ಞಾ ವಿಧಿ ಸ್ವೀಕರಿಸಿದರು. ಜಿಲ್ಲಾ ಚುನಾವಣಾ ರಾಯಭಾರಿಗಳಾದ ಡಾ॥ಶಿವಕುಮಾರ ಮಾಲಿಪಾಟೀಲ್ ಅವರು ಮಾತನಾಡಿ, ಮೇ-7 ರಂದು ಜರುಗುವ ಚುನಾವಣೆಯಲ್ಲಿ ವಿಳಂಬ ಮಾಡದೇ ಮತಗಟ್ಟೆಗೆ ಹೋಗಿ ಮತ ಚಲಾಯಿಸಿರೆಂದು ಕರೆ ನೀಡಿದರು. ಅವಿದ್ಯಾವಂತರಿಗಿಂತ ವಿದ್ಯಾವಂತ ವರ್ಗವೇ ಮತದಾನದಿಂದ ದೂರ ಉಳಿಯುತ್ತಾರೆ ಎಂಬ ಅಪವಾದ ಇದೆ. ಇದನ್ನು ತೆಗೆದುಹಾಕಿ ಮೇ 7 ರಂದು ಕೇವಲ ಐದು ನಿಮಿಷ ಮತಗಟ್ಟೆಗೆ ಬಂದು ನಿರ್ಭೀತಿಯಿಂದ, ಪ್ರಾಮಾಣಿಕವಾಗಿ ಮತ ಚಲಾಯಿಸೋಣ. ಯಾವುದೇ ಆಸೆ ಆಮಿಷಕ್ಕೆ ಒಳಗಾಗದೇ ಯೋಗ್ಯ ವ್ಯಕ್ತಿಯನ್ನು ಆಯ್ಕೆ ಮಾಡೋಣ. ಈ ಮೂಲಕ ನಮ್ಮ ದೇಶದ ಬಹುದೊಡ್ಡ ವ್ಯವಸ್ಥೆಯಾದ ಪ್ರಜಾಪ್ರಭುತ್ವದ ಘನತೆಯನ್ನು ಎತ್ತಿಹಿಡಿಯೋಣ ಎಂದರು.ಜಿಲ್ಲಾ ಚುನಾವಣಾ ರಾಯಭಾರಿಗಳಾದ ರಮ್ಯ ಮಾತನಾಡಿ, ಇದೀಗ ದೇಶ ಸೇವೆ ಮಾಡುವ ಅವಕಾಶ ಒದಗಿ ಬಂದಿದೆ. ಮತದಾರರು ಯಾವುದೇ ಆಸೆ, ಆಮೀಷಕ್ಕೆ ಬಲಿಯಾಗದೆ ಮತದಾನ ಮಾಡಬೇಕು. ಮತದಾನ ಪ್ರಕ್ರಿಯೆಯಿಂದ ದೂರ ಉಳಿಯಬಾರದು ಎಂದರು.ಜಿಲ್ಲಾ ಚುನಾವಣಾ ರಾಯಭಾರಿ ಮೆಹಬೂಬ ಕಿಲ್ಲೆದಾರ ಮತದಾನ ಪ್ರಮಾಣ ಹೆಚ್ಚಳವಾಗಲು ಶ್ರಮಿಸುವಂತೆ ಮತದಾನ ಜಾಗೃತ ಗೀತೆಗಳನ್ನು ಪ್ರಸ್ತುತ ಪಡಿಸಿದರು.

ಕಿರುಚಿತ್ರ ಬಿಡುಗಡೆ:-ಮತದಾನ ಜಾಗೃತಿ ಮೂಡಿಸಲು ಸುರೇಶ ಕಂಬಳಿ, ಹನಮಂತಪ್ಪ ಕುರಿ ಇವರು ತಯಾರಿಸಿದ 02 ನಿಮಿಷದ ಒಂದು ಕಿರು ಚಿತ್ರ ವಿಡಿಯೋವನ್ನು ಜಿಲ್ಲಾಧಿಕಾರಿಗಳು ಇದೇ ಸಂದರ್ಭದಲ್ಲಿ ಬಿಡುಗಡೆಗೊಳಿಸಿದರು.ಮತದಾನ ಜಾಗೃತಿಯ ಪೋಸ್ಟರ್ ಬಿಡುಗಡೆ:- ಜಿಲ್ಲಾ ಚುನಾವಣಾ ರಾಯಭಾರಿಗಳನ್ನು ಒಳಗೊಂಡ ಮತದಾನ ಜಾಗೃತಿಯ ಪೋಸ್ಟರ್ ಗಳನ್ನು ಬಿಡುಗಡೆಗೊಳಿಸಿದರು.ಮೆರುಗು ತಂದ ಎತ್ತಿನ ಬಂಡಿ ಜಾಥಾ ಹಾಗೂ ಮಹಿಳೆಯರಿಂದ ಪೂರ್ಣ ಕುಂಭ ಮೆರವಣಿಗೆ:- ಅಳವಂಡಿ ಗ್ರಾಮದಲ್ಲಿ ಎತ್ತಿನ ಬಂಡಿಗಳಿಗೆ ತಳಿರು ತೋರಣ, ವಿವಿಧ ಬಣ್ಣವನ್ನು ಎತ್ತುಗಳಿಗೆ ಹಚ್ಚಿ ಕಾರ ಹುಣ್ಣಿಮೆಯಲ್ಲಿ ಸಿಂಗರಿಸಿದಂತೆ 20 ಎತ್ತಿನ ಬಂಡಿಗಳಿಗೆ ಅಲಂಕಾರಗೊಳಿಸಿ ಜಾಥಾ ನಡೆಸಲಾಗಿದ್ದು, ಜಾಥಾ ನೋಡುಗರ ಗಮನ ಸೆಳೆಯಿತು. ಸಂಜೀವಿನಿ ಯೋಜನೆಯ 150ಕ್ಕೂ ಹೆಚ್ಚು ಮಹಿಳಾ ಸ್ವಸಹಾಯ ಸಂಘದ ಸದಸ್ಯರು ಪೂರ್ಣ ಕುಂಭದೊಂದಿಗೆ ಸಾಥ್ ನೀಡಿದರು.ಎತ್ತಿನ ಬಂಡಿ ಜಾಥಾವು ಗ್ರಾಮದ ಪದವಿ ಪೂರ್ವ ಕಾಲೇಜಿನಿಂದ ಪ್ರಾರಂಭವಾಗಿ ಬಸ್ ಸ್ಟ್ಯಾಂಡ್ ಸರ್ಕಲ್, ಅಗಸಿ ಮೂಲ ಸಾಗಿ, ಕಲ್ಗುಡಿಯವರ ಓಣಿ ಮೂಲಕ ಬನ್ನಿಕಟ್ಟಿವರೆಗೆ ತಲುಪಿ ಮುಕ್ತಾಯಗೊಂಡಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಹಾಗು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ತಿಪ್ಪಣ್ಣ ಶಿರಸಗಿ, ಕೊಪ್ಪಳ ತಾಲೂಕ ಸ್ವೀಪ್ ಅಧ್ಯಕ್ಷರು ಹಾಗು ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಜಿಲ್ಲಾ ಪಂಚಾಯತ ಸಹಾಯಕ ಕಾರ್ಯದರ್ಶಿ ಶಿವಪ್ಪ ಸುಬೇದಾರ್, ತಹಶೀಲ್ದಾರ ವಿಠ್ಠಲ್ ಚೌಗಲಾ, ಜಿಲ್ಲಾ ಚುನಾವಣಾ ರಾಯಭಾರಿಗಳಾದ ಪೂರ್ಣಿಮಾ ಯೋಳುಬಾವಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಜಯಶ್ರೀ, ಅಳವಂಡಿ ಹೋಬಳಿಯ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಹಾಗು ತಾಲೂಕ ಸ್ವೀಪ್ ಸಮಿತಿಯ ಸದಸ್ಯರುಗಳು, ತಾಲೂಕ ಪಂಚಾಯತಿಯ ಸಿಬ್ಬಂದಿಗಳು, ಕಂದಾಯ ಇಲಾಖೆಯ ಸಿಬ್ಬಂದಿಗಳು, ಗ್ರಾಮ ಪಂಚಾಯತಿಯ ಸಿಬ್ಬಂದಿಗಳು, ಸಂಜೀವಿನಿ ಸಂಘದ ಮಹಿಳೆಯರು ಹಾಜರಿದ್ದರು. ಕಾರ್ಯಕ್ರಮವನ್ನು ಹನಮಂತಪ್ಪ ಕುರಿ ನಿರ್ವಹಿಸಿದರು.

# 7 ಹಂತದಲ್ಲಿ ಮತದಾನ ನಡೆಸುವ ಅಗತ್ಯ ಏನಿತ್ತು: ಮಾಜಿ ಸಿಎಂ ವೀರಪ್ಪ ಮೊಯ್ಲಿ ಕಿಡಿ

(1 ನೇ ಪುಟದಿಂದ)

ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬದಲಾವಣೆ ಮಾಡುತ್ತಿದ್ದಾರೆ.ಜೆಡಿಎಸ್ ಜೊತೆಗೆ ಮೈತ್ರಿ ಮಾಡಿಕೊಂಡಿರುವುದನ್ನು ಮರೆತ್ತಿದ್ದಾರೆ ಎಂದರು.

ಬಿಜೆಪಿ ಪ್ರಣಾಳಿಕೆ ಪಕ್ಷದಲ್ಲ. ಇದು ಮೋದಿ ಗ್ಯಾರಂಟಿ. ಇದನ್ನು ಜನ ನಂಬುವರೆ ಎಂದು ಪ್ರಶ್ನಿಸಿದ ಅವರು, ಚುನಾವಣಾ ಬಾಂಡ್ ಮೇಲೆ ಕೋಟ್ಯಂತರ ರೂ. ಭ್ರಷ್ಟಾಚಾರ ಮಾಡಿದ್ದಾರೆ ಇದರ ಬಗ್ಗೆ ಕೇಂದ್ರ ಸರಕಾರ ಯಾವ ಕ್ರಮ ಕೈಗೊಂಡಿದೆ ಎಂದರು.

ಕೇಂದ್ರದಲ್ಲಿ ಯುಪಿಎ ಸರಕಾರದ ಸಂದರ್ಭದಲ್ಲಿ ಪ್ರಧಾನಿಯಾಗಿದ್ದ ಮನಮೋಹನ್ ಸಿಂಗ್ ಅವರು ರೈತರ ಮೇಲಿನ ಸಂಪೂರ್ಣ ಸಾಲಾ ಮನ್ನಾ ಮಾಡಲಾಗಿತ್ತು. ಆದರೆ ನರೇಂದ್ರ ಮೋದಿ ಒಬ್ಬ ರೈತನ ಸಾಲ ಮಾಡಿಲ್ಲ. ಇದು ಜನರಿಗೆ ಕೆಟ್ಟ ದಿನ, ಮೋದಿಗೆ ಒಳ್ಳೆಯ ದಿನವಾಗಿದೆ ಎಂದರು. ಹಾಸನದ ಎನ್ ಡಿಎ ಮೈತ್ರಿಕೂಟದ ಅಭ್ಯರ್ಥಿ ಪ್ರಜ್ವಲ್ ರೇವಣ್ಣನ ಕರ್ಮಕಾಂಡದಿಂದ ಇಡೀ ಕರ್ನಾಟಕದ ರಾಜಕೀಯದ ಹೆಸರನ್ನು ಕೆಡಿಸಿದ್ದಾನೆ. ಕಳೆದ 2014ರ ಲೋಕಸಭಾ ಚುನಾವಣೆಯಲ್ಲಿ ಮಾಜಿ ಪ್ರಧಾನ ಎಚ್.ಡಿ.ದೇವೇಗೌಡ ನರೇಂದ್ರ ಮೋದಿ ಅವರು ಪ್ರಧಾನಿಯಾದರೆ ದೇಶ ಬಿಡುತ್ತೇನೆ ಎಂದಿದ್ದರು. ಈಗ ಅವರ ಪಕ್ಕ ಕುಳಿತುಕೊಂಡು ಚುನಾವಣೆಯ ಪ್ರಚಾರ ನಡೆಸಿದ್ದಾರೆ ಎಂದರು.

ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ಯಾರೂ ಪಾತ್ರ ವಹಿಸಿದ್ದಾರೆ ಮುಖ್ಯವಲ್ಲ. ಅಭಿನಯ ಮಾಡಿದ್ದು ಮುಖ್ಯ. ಇದು ಕರ್ನಾಟಕ ರಾಜಕೀಯದಲ್ಲಿ ತಲೆ ತಗ್ಗಿಸುವ ಕೆಲಸವಾಗಿದು ಇಡೀ ದೇವೇಗೌಡರ ಕುಟುಂಬ ರಾಜಕೀಯಕ್ಕೆ ರಾಜೀನಾಮೆ ಕೊಡಬೇಕು ಎಂದು ಮಾಜಿ ಸಿಎಂ ವೀರಪ್ಪ ಮೊಯ್ಲಿ ಒತ್ತಾಯಿಸಿದರು.

ಶಾಸಕರಾದ ಆಸೀಫ್ ಸೇಠ್, ನಾಗರಾಜ ಯಾದವ, ಮಾಜಿ ಸಚಿವ ಅಭಯಚಂದ್ರ ಜೈನ್, ವಿನಯ ನಾವಲಗಟ್ಟಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# SC,ST,OBC ಮೀಸಲಾತಿಯನ್ನು ಲೂಟಿ ಮಾಡಿದ್ದರೆ, ಅದು ಕಾಂಗ್ರೆಸ್ ಪಕ್ಷ ಮಾತ್ರ: ಅಮಿತ್ ಶಾ

(1 ನೇ ಪುಟದಿಂದ)

ಬಡವರು ಇನ್ನಷ್ಟು ಬಡವರಾದರು. ಕಳೆದ 10 ವರ್ಷಗಳಲ್ಲಿ 25 ಕೋಟಿ ಜನರು ಬಡತನ ರೇಖೆಯಿಂದ ಹೊರಬಂದು, ಭಾರತವು ವಿಶ್ವಾದ್ಯಂತ ಹೊಸ ಗುರುತನ್ನು ಪಡೆಯುತ್ತಿರುವಾಗ, ಮೋದಿ ಸರ್ಕಾರದ ಸಾಧನೆಗಳನ್ನು ಜನರು ಸಹ ಗುರುತಿಸಿದ್ದಾರೆ. ಹೋಲಿಸಿ ನೋಡಿದಾಗ, ಮೋದಿ ಸರ್ಕಾರದ 10 ವರ್ಷಗಳು, ಕಾಂಗ್ರೆಸ್ನ 55 ವರ್ಷಗಳ ಆಡಳಿತಕ್ಕಿಂತ ಉತ್ತಮವಾಗಿವೆ. 2024ರ ಲೋಕಸಭೆ ಚುನಾವಣೆಯಲ್ಲಿ ಜನರು ಯಾವ ಕಡೆ ಒಲವು ಹೊಂದಿದ್ದಾರೆ ಎಂದು ಊಹಿಸುವುದು ಸುಲಭ. ಭಾರತೀಯ ರಾಜಕೀಯ ಚಾಣಕ್ಯ ಅಮಿತ್ ಶಾ 2024ರ ಲೋಕಸಭೆ ಚುನಾವಣೆಯಲ್ಲಿ ಕೇಸರಿ ಬಾವುಟ ಹಾರಿಸಲು ಸಂಪೂರ್ಣ ಸಿದ್ಧರಾಗಿದ್ದಾರೆ.ಶಾ ಒಂದು ಕ್ಷೇತ್ರಕ್ಕೆ ಎಂಟ್ರಿ ಕೊಟ್ಟರೆ ಗೆಲುವು ಶತಸಿದ್ಧ. ಅವರ ಚಾಣಾಕ್ಷ ತಂತ್ರಗಳಿಗೆ ಉತ್ತರವಿಲ್ಲ ಎಂದು ಪ್ರತಿಪಕ್ಷಗಳೂ ಒಪ್ಪಿಕೊಂಡಿವೆ.2024ರಲ್ಲಿ 400ಕ್ಕೂ ಹೆಚ್ಚು ಸೀಟು ಪಡೆದು ಮೂರನೇ ಬಾರಿಗೆ ಮೋದಿಯವರು ಪ್ರಧಾನಿ ಯಾಗುವುದು ಖಚಿತ.ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಮೋದಿಯ ಮ್ಯಾಜಿಕ್ ಜೊತೆಗೆ ಶಾ ಫ್ಯಾಕ್ಟರ್ ಕೂಡ ನಿರ್ಣಾಯಕ ಪಾತ್ರ ವಹಿಸಲಿದೆ.

# "ಸಮಾಜದ ಅಂಕು-ಡೊಂಕು ತಿದ್ದುವುದೇ ಪತ್ರಿಕೋದ್ಯಮ"

ಪ್ರಾದೇಶಿಕ, ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ವಿದ್ಯಮಾನಗಳನ್ನು ಕ್ಷಣ ಕ್ಷಣದ ಮಾಹಿತಿಗಳನ್ನು ಜನರಿಗೆ ತಲುಪಿಸಿ, ಸಮಾಜದ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲುವ ಪತ್ರಿಕಾ ಮಾಧ್ಯಮದ ಎಲ್ಲಾ ಮಿತ್ರರಿಗೆ ರಾಷ್ಟ್ರೀಯ ಪತ್ರಿಕಾ ದಿನಾಚರಣೆಯ ಶುಭಾಶಯಗಳು. ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನವನ್ನು ವಿಶ್ವಸಂಸ್ಥೆಯ ಜನರಲ್ ಅಸೆಂಬ್ಲಿಯು ಡಿಸೆಂಬರ್ 1993 ರಲ್ಲಿ ಯುನೆಸ್ಕೋದ ಸಾಮಾನ್ಯ ಸಮ್ಮೇಳನದ ಶಿಫಾರಸಿನ ಮೇರೆಗೆ ಘೋಷಿಸಿತು. ಅಂದಿನಿಂದ ವಿಂಡ್‌ಹೋಕ್ ಘೋಷಣೆಯ (ಮೇ-03) ವಾರ್ಷಿಕೋತ್ಸವವನ್ನು ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನವಾಗಿ ವಿಶ್ವಾದ್ಯಂತ ಆಚರಿಸಲಾಗುತ್ತದೆ. ಪತ್ರಿಕಾ ಸ್ವಾತಂತ್ರ್ಯದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು, ಹಕ್ಕನ್ನು ಗೌರವಿಸುವ ಮತ್ತು ಎತ್ತಿಹಿಡಿಯುವ, ಸರ್ಕಾರಗಳ ಕರ್ತವ್ಯವನ್ನು ನೆನಪಿಸಲು ಆಚರಿಸಲಾಗುತ್ತದೆ. 1948 ರ ಮಾನವ ಹಕ್ಕುಗಳ ಸಾರ್ವತ್ರಿಕ ಘೋಷಣೆಯ ಆರ್ಟಿಕಲ್ 19 ರ ಅಡಿಯಲ್ಲಿ ಪ್ರತಿಪಾದಿಸಲಾದ ಅಭಿವ್ಯಕ್ತಿ ಸ್ವಾತಂತ್ರ್ಯ ಎತ್ತಿ ಹಿಡಿಯಲು ಈ ದಿನ ಆಚರಣೆ ಮಾಡಲಾಗುತ್ತದೆ.

ಪ್ರಶಸ್ತಿ-ಪುರಸ್ಕಾರ:- ವಿಶ್ವದಲ್ಲಿ ಎಲ್ಲಿಯಾದರೂ ಪತ್ರಿಕಾ ಸ್ವಾತಂತ್ರ್ಯದ ರಕ್ಷಣೆ ಅಥವಾ ಪ್ರಚಾರಕ್ಕೆ ಮಹೋನ್ನತ ಕೊಡುಗೆ ನೀಡಿದ ಅರ್ಹ ವ್ಯಕ್ತಿ, ಸಂಸ್ಥೆಗೆ ಗಓಇಖಅಔ/ಗಿಲ್ಲೆರ್ಮೊ ಕ್ಯಾನೊ ವರ್ಲ್ಡ್ ಪ್ರೆಸ್ ಫ್ರೀಡಂ ಪ್ರಶಸ್ತಿಯನ್ನು ನೀಡುವ ಮೂಲಕ ಗಓಇಖಅಔ ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನವನ್ನು ಗುರುತಿಸುತ್ತದೆ. 1986 ರ ಡಿಸೆಂಬರ್ 17 ರಂದು ಬೊಗೋಟಾದಲ್ಲಿ ಎಲ್ ಎಸ್ಪೆಕ್ಟಡಾರ್ ತನ್ನ ಪತ್ರಿಕೆಯ ಕಚೇರಿಯ ಮುಂದೆ ಹತ್ಯೆಗೀಡಾದ ಕೊಲಂಬಿಯಾದ ಪತ್ರಕರ್ತ ಗಿಲ್ಲೆರ್ಮೊ ಕ್ಯಾನೊ ಇಸಾಜಾ ಅವರ ಗೌರವಾರ್ಥವಾಗಿ ಈ ಪ್ರಶಸ್ತಿಯನ್ನು ನೀಡಲಾಗಿದೆ. 1997 ರಲ್ಲಿ ರಚಿಸಲಾದ ಈ ಬಹುಮಾನವನ್ನು 14 ಸುದ್ದಿ ವೃತ್ತಿಪರರ ಸ್ವತಂತ್ರ ತೀರ್ಪುಗಾರರ ಶಿಫಾರಸಿನ ಮೇರೆಗೆ ನೀಡಲಾಗುತ್ತದೆ. ಪತ್ರಿಕಾ ಸ್ವಾತಂತ್ರ್ಯಕ್ಕಾಗಿ ಕೆಲಸ ಮಾಡುತ್ತಿರುವ ಪ್ರಾದೇಶಿಕ ಮತ್ತು ಅಂತರಾಷ್ಟ್ರೀಯ ಸರ್ಕಾರೇತರ ಸಂಸ್ಥೆಗಳು ಮತ್ತು ಗಓಇಖಅಔ ಸದಸ್ಯ ರಾಷ್ಟ್ರಗಳಿಂದ ಹೆಸರುಗಳನ್ನು ಸಲ್ಲಿಸಲಾಗುತ್ತದೆ. 2022 ರಲ್ಲಿ ಬೆಲಾರಸ್ ದೇಶದ ಬೆಲರೂಸಿಯನ್ ಅಸೋಸಿಯೇಷನ್ ??ಆಫ್ ಜರ್ನಲಿಸ್ಟ್ ಎಂಬ ಸಂಸ್ಥೆಯು ಪ್ರಶಸ್ತಿಯನ್ನು ಪಡೆದುಕೊಂಡಿದ್ದರೆ, 2023 ರಲ್ಲಿ ಇರಾನ್ ದೇಶದ ನಿಲೂಫರ್ ಹಮೇದಿ, ಎಲಾಹೆ ಮೊಹಮ್ಮದಿ, ನರ್ಗೆಸ್ ಮೊಹಮ್ಮದಿ ಎಂಬುವವರು ಜಂಟಿಯಾಗಿ ಪ್ರಶಸ್ತಿಯನ್ನು ಮುಡಿಗೆರಿಸಿಕೊಂಡಿದ್ದಾರೆ.

ಪತ್ರಿಕಾ ಸೂಚ್ಯಂಕ ಮತ್ತು ಭಾರತ:- ವಿಶ್ವ ಪತ್ರಿಕಾ ಸ್ವಾತಂತ್ರ್ಯ ಸೂಚ್ಯಂಕದಲ್ಲಿ ಭಾರತವು ಸ್ಥಿರವಾಗಿ ಕಳಪೆ ಶ್ರೇಯಾಂಕವನ್ನು ಹೊಂದಿದೆ, ಇದು 2022 ರಲ್ಲಿ 150 ನೇ ಸ್ಥಾನದಲ್ಲಿದ್ದದ್ದು, 2023 ರಲ್ಲಿ 161 ಕ್ಕೆ ಇಳಿದಿದೆ. ಇತ್ತೀಚಿನ ಪತ್ರಕರ್ತರ ವಿರುದ್ಧದ ಹಿಂಸಾಚಾರಕ್ಕೆ ಇದಕ್ಕೆ ಕಾರಣವಾಗಿರಲೂಬಹುದು. 2021 ರಲ್ಲಿ ಈ ಸಮೀಕ್ಷೆಯನ್ನು ನಡೆಸುವವರೆಗೆ ದೇಶದಲ್ಲಿ ನಾಲ್ಕು ಪತ್ರಕರ್ತರು ಕೊಲ್ಲಲ್ಪಟ್ಟಿದ್ದರು ಮತ್ತು ಏಳು ಪತ್ರಕರ್ತರನ್ನು ಜೈಲಿನಲ್ಲಿಡಲಾಗಿತ್ತು. ವಿಶ್ವ ಪತ್ರಿಕಾ ಸ್ವಾತಂತ್ರ್ಯ ಸೂಚ್ಯಂಕವು ಕೇವಲ ಮಾಧ್ಯಮ ಸ್ವಾತಂತ್ರ್ಯದ ಸೂಚ್ಯಂಕವಲ್ಲ. ಇದು ರಾಜತಾಂತ್ರಿಕ ಸಾಧನವಾಗಿದೆ. ಸೂಚ್ಯಂಕದಲ್ಲಿನ ಶ್ರೇಯಾಂಕವು ಸಂಬಂಧಪಟ್ಟ ದೇಶಕ್ಕೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಹಿನ್ನಡೆಯನ್ನು ತರಬಹುದು.ಅದೇನೇ ಇದ್ದರೂ ಸಹ, ದಮನಿತರ ನೋವಿಗೆ ಧ್ವನಿಯಾಗಿ ನ್ಯಾಯ ಒದಗಿಸಿಕೊಡುವ ಅಕ್ಷರ ಲೋಕವಾಗಿ ಪತ್ರಿಕೋದ್ಯಮ ಕಾರ್ಯನಿರ್ವಹಿಸುತ್ತದೆ. ಪತ್ರಿಕೋದ್ಯಮ ಪ್ರಜಾಪ್ರಭುತ್ವದ ನಾಲ್ಕನೆಯ ಸ್ತಂಭವಾಗಿದ್ದು ಜನಸಾಮಾನ್ಯರು ಮತ್ತು ಸರ್ಕಾರಗಳ ನಡುವೆ ಸಂವಹನ ಸೇತುವೆಯಾಗಿ ಕಾರ್ಯನಿರ್ವಹಿಸುತ್ತದೆ. ಪ್ರಭಾವಿಗಳ ಪ್ರಭಾವ, ಮಾಧ್ಯಮ ಕಾರ್ಯಕರ್ತರಿಗೆ ಪ್ರಾಣ ಬೆದರಿಕೆಗಳಂತಹ ಸಮಸ್ಯೆಗಳು ಭಾರತೀಯ ಮಾಧ್ಯಮಗಳು ಎದುರಿಸುತ್ತಿರುವ ಕೆಲವು ಸವಾಲುಗಳಾಗಿವೆ. ಈ ಸವಾಲುಗಳು ಪತ್ರಿಕಾ ಅಸ್ತಿತ್ವದ ಕಾರಣವನ್ನು ಪ್ರಶ್ನಿಸುತ್ತವೆ ಮತ್ತು ಇದರಿಂದಾಗಿ ದೇಶದ ಪ್ರಜಾಪ್ರಭುತ್ವ ರಚನೆಗೆ ಭಾರಿ ಅಪಾಯವಾಗಿದೆ.ಪತ್ರಿಕಾ ಮಾಧ್ಯಮ ಎಂಬುದು ಸಮಾಜದ ಕನ್ನಡಿ ಎಂದು ಹೇಳಲಾಗುತ್ತದೆ, ಸತ್ಯವನ್ನು ಪ್ರತಿಬಿಂಬಿಸುತ್ತದೆ. ಪತ್ರಿಕಾ ಸ್ವಾತಂತ್ರ್ಯ ಮತ್ತು ಸಮಾಜದ ಬಗ್ಗೆ ಅದು ಹೊಂದಿರುವ ಜವಾಬ್ದಾರಿಗಳ ಸಂಕೇತವಾಗಿದೆ, ಈ ದಿನವು ವಿಶ್ವದಲ್ಲೇ ಪತ್ರಿಕಾ ಸ್ವಾತಂತ್ರ್ಯವನ್ನು ಗುರುತಿಸುತ್ತದೆ. ಸಮಾಜದ ಅಂಕುಡೊಂಕುಗಳನ್ನು ಜಗದ ಮುಂದಿಡುವ ನಿರ್ಭೀತ ರಂಗದ ಸೇವೆಗೆ ಒಂದು ಸೆಲ್ಯೂಟ್ ಹೇಳೋಣವೇ...

ಎನ್.ಎನ್.ಕಬ್ಬೂರ